# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ವಿವಿಧ ಜಿಲ್ಲಾ ಪಂಚಾಯತಿಗಳ ವ್ಯಾಪ್ತಿಯ ಅಲ್ಪ ಸಂಖ್ಯಾತರ ಕಲ್ಯಾಣ ಇಲಾಖೆಯ ಬಾಕಿ ವೇತನ ಪಾವತಿಗಾಗಿ ಹೆಚ್ಚುವರಿ ಅನುದಾನವನ್ನು ಬಿಡುಗಡೆಗೊಳಿಸುವ ಬಗ್ಗೆ

**ಓದಲಾಗಿದೆ:**

1. ಸರ್ಕಾರದ ಆದೇಶ ಸಂಖ್ಯೆ: ಆಇ 234 ಬಿ.ಆರ್.ಎಸ್. 2020 ದಿನಾಂಕ:2.12.2020
2. ಆರ್ಥಿಕ ಇಲಾಖೆ ವೆಚ್ಚ 3 ಶಾಖೆಯ ಕಡತ ಸಂಖ್ಯೆ: ಆಇ 384 ವೆಚ್ಚ 3/2020 ಇ-ಆಫೀಸ್ ಕಡತ

**ಪ್ರಸ್ತಾವನೆ:**

ರಾಜ್ಯದ ವಿವಿಧ ಜಿಲ್ಲಾ ಪಂಚಾಯತಿಗಳ ವ್ಯಾಪ್ತಿಯ ಅಲ್ಪ ಸಂಖ್ಯಾತರ ಕಲ್ಯಾಣ ಇಲಾಖೆಯ ಕಾರ್ಯಕ್ರಮದ ಲೆಕ್ಕ ಶೀರ್ಷಿಕೆ 2225-00-103-0-34-005 ಮತ್ತು 2225-00-103-0-51-005ರಡಿ ಅನುಕ್ರಮವಾಗಿ ರೂ.85.11 ಮತ್ತು ರೂ.35.84ಲಕ್ಷ ಒಟ್ಟು ರೂ.119.95ಲಕ್ಷ ಅನುದಾನವನ್ನು ಹೆಚ್ಚುವರಿಯಾಗಿ ಒದಗಿಸಿ ಬಿಡುಗಡೆಗೊಳಿಸುವಂತೆ ಮೇಲೆ (2)ರಲ್ಲಿ ಓದಲಾದ ಕಡತದಲ್ಲಿ ಪ್ರಸ್ತಾವಿಸಲಾಗಿದೆ.

ಪ್ರಸ್ತಾವನೆಯನ್ನು ಪರಿಶೀಲಿಸಿ ಜಿಲ್ಲಾ ಪಂಚಾಯತ್ ಕಾರ್ಯಕ್ರಮದಡಿಯ ವೆಚ್ಚಕ್ಕಾಗಿ ರೂ119.95ಲಕ್ಷಗಳನ್ನು ಲೆಕ್ಕ ಶೀರ್ಷಿಕೆ 2515-00-196-1-05-300 ರಡಿ ಬಿಡುಗಡೆಗೊಳಿಸಲು ನಿರ್ಣಯಿಸಿ ಕೆಳಕಂಡಂತೆ ಆದೇಶಿಸಿದೆ.

## ಸರ್ಕಾರದ ಆದೇಶ ಸಂಖ್ಯೆ: ಆಇ 470 ವೆಚ್ಚ 6/2020(ಇ) ದಿನಾಂಕ: 14ನೇ ಡಿಸೆಂಬರ್ 2020

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ ಈ ಆದೇಶಕ್ಕೆ ಲಗತ್ತಿಸಿರುವ ಅನುಬಂಧದ ಕಾಲಂ 2ರ ಜಿಲ್ಲಾ ಪಂಚಾಯತಿಗಳಿಗೆ ಕಾಲಂ 3 ಕಾರ್ಯಕ್ರಮದಡಿ ಬಾಕಿ/ಪ್ರಸಕ್ತ ಸಾಲಿನ ವೇತನ/ಸಂಭಾವನೆ ವೆಚ್ಚಕ್ಕಾಗಿ ಅಗತ್ಯವಿರುವ ಅನುದಾನವನ್ನು ಕಾಲಂ 4ರ ಲೆಕ್ಕ ಶೀರ್ಷಿಕೆಯಡಿ ಕಾಲಂ 5ರ ಒಟ್ಟು ರೂ.119.95ಲಕ್ಷ (ರೂಪಾಯಿ ಒಂದು ನುರ ಹತ್ತೊಂಬತ್ತು ಲಕ್ಷದ ತೊಂಬತ್ತೈದು ಸಾವಿರಗಳು ಮಾತ್ರ) ಗಳನ್ನು ಬಿಡುಗಡೆಗೊಳಿಸಿದೆ. ಈ ರೀತಿ ಬಿಡುಗಡೆಗೊಳಿಸಿದ ಅನುದಾನವನ್ನು ಮೇಲೆ (1) ರಲ್ಲಿ ಓದಲಾದ ಸುತ್ತೋಲೆಯಲ್ಲಿ ನೀಡಿರುವ ನಿರ್ದೇಶನದಂತೆ ಕ್ರಮವಹಿಸಿ ಬಿಲ್ಲುಗಳ ತೀರುವಳಿಗೆ ಕ್ರಮವಹಿಸತಕ್ಕದ್ದು. ಪ್ರಸ್ತುತ ಪ್ರಕರಣಕ್ಕೆ ಆರ್ಥಿಕ ಇಲಾಖೆ ಮರುಹೊಂದಾಣಿಕೆಗೆ ಸಹಮತಿಸಿದೆ ಎಂದು ಭಾವಿಸತಕ್ಕದ್ದು.

(ಸೂಚನೆ: ಬಿಡುಗಡೆಗೊಳಿಸಿರುವ ಅನುದಾನವನ್ನು ನಿಧಿ-2ಕ್ಕೆ ಜಮೆ ಮಾಡಿಕೊಂಡು, ನಂತರ ಸಂಬಂಧಪಟ್ಟ ಜಿಲ್ಲಾ ಪಂಚಾಯತಿ ಮುಖ್ಯಲೆಕ್ಕಾಧಿಕಾರಿಗಳು ಮರು ಹೊಂದಾಣಿಕೆ ಆದೇಶವನ್ನು ಈ ಕೆಳಗಿನ ಅಧಿಕಾರಿಗಳಿಗೆ ಸುತ್ತೋಲೆರನ್ವಯ ಪ್ರಸ್ತಾವನೆ ಆರ್ಥಿಕ ಇಲಾಖೆಗೆ ಸಲ್ಲಿಸಿ ಖಜಾನೆಯಲ್ಲಿ ಅಪ್ ಲೋಡ್ ಮಾಡಿಕೊಳ್ಳುವುದು.)

ಈ ಕಾರ್ಯವನ್ನು ಆದ್ಯತೆಯ ಮೇಲೆ ಕ್ರಮವಹಿಸತಕ್ಕದ್ದು, ಯಾವುದೇ ಹಂತದಲ್ಲಿ ಅಂದರೆ ಜಿಲ್ಲಾ ಪಂಚಾಯತಿ ಅಥವಾ ಅನುಷ್ಠಾನಾಧಿಕಾರಿಗಳ ಹಂತದಲ್ಲಿ ವಿಳಂಬವಾಗಿ ಅನುದಾನ ವ್ಯಪಗತವಾದಲ್ಲಿ ಮತ್ತೊಮ್ಮೆ ಅನುದಾನವನ್ನು ಒದಗಿಸುವುದಿಲ್ಲವೆಂದು ಮತ್ತು ವಿಳಂಬಗೊಳಿಸಿದ ಅಧಿಕಾರಿಗಳ ವಿರುದ್ಧ ನಿಯಮಾನುಸಾರ ಕ್ರಮವಹಿಸಲಾಗುವುದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ

(ಪುರುಷೋತ್ತಮ್ ಸಿಂಗ್ ಬಿ.ಹೆಚ್.)
ವಿಶೇಷಾಧಿಕಾರಿ(ಜಿ.ಪಂ.) ಹಾಗೂ ಪದನಿಮಿತ್ತ
ಸರ್ಕಾರದ ಉಪ ಕಾರ್ಯದರ್ಶಿ
ಆರ್ಥಿಕ ಇಲಾಖೆ

1. ಮಹಾಲೇಖಪಾಲರು(ಎ&ಇ) ಲೆಕ್ಕ ಪರಿಶೋಧನೆ 1 & 2, ಕರ್ನಾಟಕ, ಬೆಂಗಳೂರು
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ಖಜಾನೆ-2, 7ನೇ ಮಹಡಿ, ವಾಣಿಜ್ಯ ತೆರಿಗೆ ಕಟ್ಟಡ, ಗಾಂಧಿನಗರ, ಬೆಂಗಳೂರು-2ರವರಿಗೆ
3. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು, ಯೋಜನಾ ಇಲಾಖೆ
4. ಸಂಬಂಧಿಸಿದ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು/ಮುಖ್ಯ ಲೆಕ್ಕಾಧಿಕಾರಿಗಳು
5. ಜಂಟಿ ನಿರ್ದೇಶಕರು, ಖಜಾನೆ ಗಣಕಜಾಲ ನಿರ್ವಹಣಾ ಕೇಂದ್ರ, ಖನಿಜ ಭವನ, ಬೆಂಗಳೂರು
6. ಸಂಬಂಧಿಸಿದ ಜಿಲ್ಲಾ ಖಜಾನಾಧಿಕಾರಿಗಳು
7. ರಕ್ಷಾ ಕಡತಕ್ಕೆ
8. ಹೆಚ್ಚುವರಿ ಪ್ರತಿ

# ಸರ್ಕಾರದ ಆದೇಶ ಸಂಖ್ಯೆ: ಆಇ 470 ವೆಚ್ಚ 6/2020 ದಿನಾಂಕ:14.12.2020ಕ್ಕೆ ಅನುಬಂಧ

(ರೂ.ಲಕ್ಷಗಳಲ್ಲಿ)

| ಕ್ರಮ ಸಂಖ್ಯೆ | ಜಿಲ್ಲಾ ಪಂಚಾಯತಿ | ಕಾರ್ಯಕ್ರಮದ ಲೆಕ್ಕ ಶೀರ್ಷಿಕೆ 2225-00-103-0-51-005 | ಕಾರ್ಯಕ್ರಮದ ಲೆಕ್ಕ ಶೀರ್ಷಿಕೆ 2225-00-103-0-34-005 | ಲೆಕ್ಕ ಶೀರ್ಷಿಕೆ 2515-00-196-1-05-300ರಿಂದ ಒಟ್ಟು ಬಿಡುಗಡೆಗೊಳಿಸಿದ ಅನುದಾನ |
|---|---|---|---|---|
| 1 | ಚಾಮರಾಜನಗರ | 0.27 | 0.00 | 0.27 |
| 2 | ದಕ್ಷಿಣ ಕನ್ನಡ | 0.00 | 0.03 | 0.03 |
| 3 | ರಾಮನಗರ | 0.49 | 0.00 | 0.49 |
| 4 | ಕೋಲಾರ | 0.63 | 0.67 | 1.30 |
| 5 | ಗದಗ | 0.00 | 2.94 | 2.94 |
| 6 | ಬಾಗಲಕೋಟೆ | 0.10 | 2.41 | 2.51 |
| 7 | ಬಳ್ಳಾರಿ | 4.44 | 4.86 | 9.30 |
| 8 | ಬೆಳಗಾವಿ | 0.00 | 6.31 | 6.31 |
| 9 | ಬೀದರ್ | 5.44 | 0.00 | 5.44 |
| 10 | ವಿಜಯಪುರ | 6.32 | 3.49 | 9.81 |
| 11 | ಚಿಕ್ಕಬಳ್ಳಾಪುರ | 0.00 | 0.63 | 0.63 |
| 12 | ಚಿಕ್ಕಮಗಳೂರು | 0.27 | 0.69 | 0.96 |
| 13 | ಚಿತ್ರದುರ್ಗ | 0.07 | 0.02 | 0.09 |
| 14 | ದಾವಣಗೆರೆ | 1.95 | 2.03 | 3.98 |
| 15 | ಧಾರವಾಡ | 2.22 | 0.05 | 2.27 |
| 16 | ಕಲಬುರಗಿ | 2.18 | 36.30 | 38.48 |
| 17 | ಹಾಸನ | 4.24 | 0.00 | 4.24 |
| 18 | ಕೊಡಗು | 0.35 | 0.00 | 0.35 |
| 19 | ಕೊಪ್ಪಳ | 0.00 | 4.10 | 4.10 |
| 20 | ಮಂಡ್ಯ | 0.00 | 0.60 | 0.60 |
| 21 | ಹಾವೇರಿ | 0.54 | 0.00 | 0.54 |
| 22 | ಶಿವಮೊಗ್ಗ | 1.94 | 0.49 | 2.43 |
| 23 | ತುಮಕೂರು | 0.00 | 15.62 | 15.62 |
| 24 | ಬೆಂಗಳೂರು ನಗರ | 0.00 | 2.88 | 2.88 |
| 25 | ಮೈಸೂರು | 3.19 | 0.00 | 3.19 |
| 26 | ಯಾದಗಿರಿ | 0.00 | 0.99 | 0.99 |
| 27 | ರಾಯಚೂರು | 0.20 | 0.00 | 0.20 |
| | **ಒಟ್ಟು** | **34.84** | **85.11** | **119.95** |